# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

**ಆಡಳಿತ ಕಛೇರಿ:** ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ – 563 103.

**ನಗರ ಕಛೇರಿ:** ಜ್ಞಾನಜ್ಯೋತಿ ಭವನ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು – 560 001

**ವೆಬ್‌ಸೈಟ್:** http://bnu.ac.in **ಇಮೇಲ್:** registrar@bnu.ac.in **bangalorenorthuniversity2017@gmail.com**

**ಸಂಖ್ಯೆ: ಬಿ.ಎನ್.ಯು. /ಶೈಕ್ಷಣಿಕ/ ಸ್ನಾತಕ.ಪ್ರ /400/2018–19** **ದಿನಾಂಕ: 28.06.2018**

## ಸ್ನಾತಕೋತ್ತರ ಪದವಿ ಪ್ರವೇಶಾತಿಗೆ ಅಧಿಸೂಚನೆ

2018–19ನೇ ಶೈಕ್ಷಣಿಕ ಸಾಲಿಗೆ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ; ಸ್ನಾತಕೋತ್ತರ ಕೇಂದ್ರ, ಕೋಲಾರ ಮತ್ತು ವಿಶ್ವವಿದ್ಯಾಲಯದ ವ್ಯಾಪ್ತಿಯ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ವಿವಿಧ ಸಂಯೋಜಿತ ಕಾಲೇಜುಗಳಲ್ಲಿ ಲಭ್ಯವಿರುವ ಈ ಕೆಳಕಂಡ ಸ್ನಾತಕೋತ್ತರ (ಸಿಬಿಸಿಎಸ್ ಪದ್ಧತಿ) ಪದವಿ ಕೋರ್ಸುಗಳ (ರಾಜ್ಯ ಸರ್ಕಾರದ ಅನುಮೋದನೆಯನ್ನು ಕಾಯ್ದಿರಿಸಿ) ಪ್ರವೇಶಾತಿಗೆ ಅರ್ಜಿಗಳನ್ನು ಆಹ್ವಾನಿಸಿದೆ.

**ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರ, ಕೋಲಾರ ಇಲ್ಲಿ ಲಭ್ಯವಿರುವ ಸ್ನಾತಕೋತ್ತರ ಕೋರ್ಸುಗಳ ವಿವರ**

**ಅ. ಕಲಾ ನಿಕಾಯ:** ಎಂ.ಎ. ಕನ್ನಡ, ಇಂಗ್ಲೀಷ್, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಹಾಗೂ ಸಮಾಜ ಕಾರ್ಯ (ಎಂ.ಎಸ್.ಡಬ್ಲ್ಯೂ).

**ಆ. ವಿಜ್ಞಾನ ನಿಕಾಯ:** ಎಂ.ಎಸ್ಸಿ. ಗಣಿತಶಾಸ್ತ್ರ, ಗಣಕ ವಿಜ್ಞಾನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ (ಎಂ.ಎಲ್.ಐ.ಎಸ್ಸಿ.), ಸಸ್ಯಶಾಸ್ತ್ರ ಮತ್ತು ಭೌತಶಾಸ್ತ್ರ.

**ಇ. ವಾಣಿಜ್ಯ ನಿಕಾಯ:** ಎಂ.ಕಾಂ.

**ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳಲ್ಲಿ ಇರುವ ಸ್ನಾತಕೋತ್ತರ ಕೋರ್ಸಗಳ ವಿವರ:**

**ಅ. ಕಲಾ ನಿಕಾಯ:** ಎಂ.ಎ. ಕನ್ನಡ, ಇಂಗ್ಲೀಷ್, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಪತ್ರಿಕೋದ್ಯಮ ಮತ್ತು ಸಂವಹನ ಹಾಗೂ ಸಮಾಜ ಕಾರ್ಯ(ಎಂ.ಎಸ್.ಡಬ್ಲ್ಯೂ).

**ಆ. ವಿಜ್ಞಾನ ನಿಕಾಯ:** ಎಂ.ಎಸ್ಸಿ. ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಪ್ರಾಣಿಶಾಸ್ತ್ರ, ಗಣಕ ವಿಜ್ಞಾನ, ಜೀವ ರಸಾಯನಶಾಸ್ತ್ರ, ಜೀವ ತಂತ್ರಜ್ಞಾನ, ಸೂಕ್ಷ್ಮಜೀವಶಾಸ್ತ್ರ, ಆಡಿಯೋಲಜಿ, ಸ್ಪೀಚ್ ಲಾಂಗ್ವೇಜ್ ಪೆಥಾಲಜಿ, ಆಡಿಯೋಲಜಿ ಅಂಡ್ ಸ್ಪೀಚ್ ಲಾಂಗ್ವೇಜ್ ಪೆಥಾಲಜಿ. ಫ್ಯಾಷನ್ ಅಂಡ್ ಅಪೆರಲ್ ಡಿಸೈನ್, ಮನಃಶಾಸ್ತ್ರ ಮತ್ತು ಸೈಕಾಲಜಿಕಲ್ ಕೌನ್ಸಲಿಂಗ್.

**ಇ. ವಾಣಿಜ್ಯ ಮತ್ತು ನಿರ್ವಹಣಾ ನಿಕಾಯ:** ಎಂ.ಕಾಂ., ಎಂ.ಕಾಂ. (ಫೈನಾನ್ಷಿಯಲ್ ಅನಾಲಿಸಿಸ್), ಎಂ.ಟಿ.ಟಿ.ಎಂ. ಮತ್ತು (ಟೂರಿಸಂ ಅಂಡ್ ಟ್ರಾವೆಲ್ ಮ್ಯಾನೇಜ್ಮೆಂಟ್).

**ಸೂಚನೆ:** 1. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ವಿವಿಧ ಕಾಲೇಜುಗಳು ಮತ್ತು ಈ ಕಾಲೇಜುಗಳಲ್ಲಿ ಲಭ್ಯವಿರುವ ಸ್ನಾತಕೋತ್ತರ ಕೋರ್ಸುಗಳ ವಿವರಗಳನ್ನು ವೆಬ್‌ಸೈಟ್ http://bnu.ac.in ನಲ್ಲಿ ಪ್ರಕಟಿಸಿದೆ.

2. ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸಿಗಳಿಗೆ ಸಿ.ಇ.ಟಿ. (ಕರ್ನಾಟಕ ಪರೀಕ್ಷಾ ಪ್ರಾಧಿಕಾರ) ಕರ್ನಾಟಕ ಸರ್ಕಾರ ಇವರ ಮೂಲಕ ಪ್ರವೇಶ ಮಾಡಲಾಗುವುದು

**ಈ. ಶಿಕ್ಷಣ ನಿಕಾಯ:** ಎಂ.ಇಡಿ. (ಶಿಕ್ಷಣ)

**ಇ. ಅರ್ಜಿಯನ್ನು ಸಲ್ಲಿಸಲು ಮಾರ್ಗಸೂಚಿಗಳು:**

1. ಪ್ರತಿಯೊಂದು ಸ್ನಾತಕೋತ್ತರ ಕೋರ್ಸಿಗೆ ಪ್ರತ್ಯೇಕ ಅರ್ಜಿ ಸಲ್ಲಿಸಬೇಕು.

2. ಅರ್ಜಿ ನಮೂನೆ, ಅರ್ಹತೆ, ಸೀಟ್ ಮಾಟ್ರಿಕ್ಸ್ ಮತ್ತು ಕೋರ್ಸ‌ಗಳ ಶುಲ್ಕದ ಮಾಹಿತಿಗಳನ್ನು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವೆಬ್‌ಸೈಟ್ http://bnu.ac.in ನಲ್ಲಿ ನೋಡಬಹುದು.
3. **ಅರ್ಜಿ ಶುಲ್ಕ:** ಸಾಮಾನ್ಯ ವರ್ಗದ ಅಭ್ಯರ್ಥಿಗಳು ರೂ. 200/– ಮತ್ತು ಪರಿಶಿಷ್ಟ ಜಾತಿ / ಪಂಗಡ ಹಾಗೂ ಪ್ರವರ್ಗ-1 ಅಭ್ಯರ್ಥಿಗಳು ರೂ. 100/– ಗಳನ್ನು ಆನ್‌ಲೈನ್ ಅಥವಾ ಆಫ್‌ಲೈನ್ ಮುಖಾಂತರ **"ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ"** ಇವರ ಹೆಸರಿಗೆ ಸಂದಾಯ ಮಾಡಿದ ಮೂಲ ಶುಲ್ಕದ ರಸೀಧಿಯನ್ನು ಭರ್ತಿ ಮಾಡಿ ಅರ್ಜಿಯ ಜೊತೆ ಲಗತ್ತಿಸತಕ್ಕದ್ದು.
4. ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳ ಜೊತೆ ಸೀಟುಗಳ ಕೋರಿಕೆಗೆ ಬೇಕಾಗುವ ಪೂರಕ ದಾಖಲೆಗಳನ್ನು ಲಗತ್ತಿಸಿ, **ನೊಂದಾಯಿತ ಅಂಚೆಯ ಮುಖಾಂತರ** ಅಥವಾ **ಖುದ್ದಾಗಿ** ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ **ಆಡಳಿತ ಕಛೇರಿ, (ಶ್ರೀ ದೇವರಾಜ ಅರಸು ವೈದ್ಯಕೀಯ ವಿಶ್ವವಿದ್ಯಾಲಯದ ಎದುರು), ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ – 563 103 ಅಥವಾ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ನಗರ ಕಛೇರಿ: ಜ್ಞಾನಜ್ಯೋತಿ ಆಡಿಟೋರಿಯಂ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು – 560 001** ಈ ವಿಳಾಸಕ್ಕೆ ಅರ್ಜಿಗಳನ್ನು ಕಳುಹಿಸತಕ್ಕದ್ದು.
5. ಭರ್ತಿ ಮಾಡಿದ ಅರ್ಜಿಗಳನ್ನು ನಿಗಧಿ ಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸಲು ಅಥವಾ ತಲುಪುವ ಅರ್ಜಿಗಳನ್ನು ಯಾವುದೇ ಮಾಹಿತಿ ನೀಡದೇ ಸಾರಸಗಟಾಗಿ ತಿರಸ್ಕರಿಸಲಾಗುವುದು.
6. ಎಂ.ಎಸ್ಸಿ. ಆಡಿಯೋಲಜಿ, ಸ್ಪೀಚ್ ಲಾಂಗ್ವೇಜ್ ಫೆಥಾಲಜಿ ಹಾಗೂ ಆಡಿಯೋಲಜಿ ಅಂಡ್ ಸ್ಪೀಚ್ ಲಾಂಗ್ವೇಜ್ ಪೆಥಾಲಜಿ ಕೋರ್ಸ್‌ಗಳಿಗೆ ಭರ್ತಿ ಮಾಡಿದ ಅರ್ಜಿಗಳನ್ನು **ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ನಗರ ಕಛೇರಿ: ಜ್ಞಾನಜ್ಯೋತಿ ಆಡಿಟೋರಿಯಂ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು – 560 001** ಇಲ್ಲಿಗೆ ಸಲ್ಲಿಸಲು ಕೋರಿದೆ.
7. ಮೇಲಿನ ವಿಷಯಗಳಿಗೆ ಸಂಭಂದಪಟ್ಟಂತೆ ಹೆಚ್ಚಿನ ಮಾಹಿತಿಗಾಗಿ ಕುಲಸಚಿವರು/ ಕುಲಸಚಿವರು(ಮೌಲ್ಯಮಾಪನ) ಇವರುಗಳನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 08152 243152/53/55/56, 080-22237222, 22237779, 22237766, 9448482619, 9448454872.
   ಇಮೇಲ್: bangalorenorthuniversity2017@gmail.com ಮತ್ತು registrar@bnu.ac.in

| **ಅರ್ಜಿಗಳನ್ನು ವಿತರಿಸುವ, ಅರ್ಜಿಗಳನ್ನು ಸಲ್ಲಿಸುವ ಹಾಗೂ ಪ್ರವೇಶ ಪ್ರಕ್ರಿಯೆಯ ದಿನಾಂಕಗಳು:** | |
|---|---|
| ಅ) ಅಂತರಜಾಲ ಮೂಲಕ ಅರ್ಜಿಗಳನ್ನು ಪಡೆಯುವ ಪ್ರಾರಂಭದ ದಿನಾಂಕ | 04.07.2018 |
| ಆ) ದಂಡ ಶುಲ್ಕವಿಲ್ಲದೆ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ | 25.07.2018 |
| ಇ) ರೂ. 200/– ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 28.07.2018 |
| ಈ) ಜೇಷ್ಠತಾ ಪಟ್ಟಿ ಪ್ರಕಟಿಸುವ ದಿನಾಂಕ | 31.07.2018 |
| ಉ) ಜೇಷ್ಠತಾ ಪಟ್ಟಿಯಲ್ಲಿನ ದೋಷಗಳ ಬಗ್ಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 02.08.2018 |
| ಊ) ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸುವ ದಿನಾಂಕ | 04.08.2018 |
| ಋ) ವಿಜ್ಞಾನ ವಿಷಯಗಳಿಗೆ ಪ್ರವೇಶ ಪ್ರಕ್ರಿಯೆ ದಿನಾಂಕಗಳು | 06.08.2018 ಮತ್ತು 07.08.2018 |
| ಎ) ಕಲಾ, ವಾಣಿಜ್ಯ ಮತ್ತು ಶಿಕ್ಷಣ ವಿಭಾಗಗಳಿಗೆ ಪ್ರವೇಶ ಪ್ರಕ್ರಿಯೆ ದಿನಾಂಕಗಳು | 08.08.2018 ರಿಂದ 09.08.2018 |
| ಏ) ಪ್ರಥಮ ಸೆಮಿಸ್ಟರ್ ತರಗತಿಗಳು ಪ್ರಾರಂಭವಾಗುವ ದಿನಾಂಕ | 13.08.2018 |

**ಆದೇಶದ ಮೇರೆಗೆ**

**ಕುಲಸಚಿವರು**

ಗೆ,

1. ಕುಲಪತಿಗಳು / ಕುಲಸಚಿವರ ಆಪ್ತ ಕಾರ್ಯದರ್ಶಿಗಳು ಹಾಗೂ ಕುಲಸಚಿವರು(ಮೌಲ್ಯಮಾಪನ) / ವಿತ್ತಾಧಿಕಾರಿಗಳ, ಆಪ್ತ ಸಹಾಯಕರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ – 563 103.
2. ಪ್ರಾಂಶುಪಾಲರು, ಸಂಯೋಜಿತ ಕಾಲೇಜುಗಳು (ಸ್ನಾತಕೋತ್ತರ) ಬೆಂಗಳೂರು ಉತ್ತರ ವಿಶ್ವವಿದ್ಯಾಲಯ.
3. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕೋಲಾರ – 563 139.
4. ಕಛೇರಿ ಪ್ರತಿ.